ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಎಂಟನೇ ಅಧಿವೇಶನ)
(ಮುಂದುವರೆದ ಉಪವೇಶನಗಳು)

ಕಾರ್ಯಕಲಾಪಗಳ ಪಟ್ಟಿ

ಶುಕ್ರವಾರ, ದಿನಾಂಕ 27ನೇ ನವೆಂಬರ್, 2015
(ಸಮಯ: ಬೆಳಗ್ಗೆ 10.00 ಗಂಟೆಗೆ)

------

1. ಶಾಸನ ರಚನೆ

ವಿಧೇಯಕವನ್ನು ಹಿಂದಕ್ಕೆ ಪಡೆಯುವುದು.

ಕರ್ನಾಟಕ ಜಲಸಾರಿಗೆ ಮಂಡಳಿ ವಿಧೇಯಕ, 2011
ಶ್ರೀ ಬಾಬುರಾವ್ ಚಿಂಚನಸೂರು (ಜವಳಿ, ಬಂದರು ಹಾಗೂ ಒಳನಾಡು ಜಲಸಾರಿಗೆ ಸಚಿವರು) ಅವರು:-

2011ನೇ ಸಾಲಿನ ಕರ್ನಾಟಕ ಜಲಸಾರಿಗೆ ಮಂಡಳಿ ವಿಧೇಯಕವನ್ನು ಹಿಂಪಡೆಯಲು ಅನುಮತಿ ಕೋರುವುದು.

2 . ವಿತ್ತೀಯ ಕಾರ್ಯಕಲಾಪ

1. ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಯವರು) ಅವರು:- 2015-16ನೇ ಸಾಲಿನ ರಾಜ್ಯ ಹಣಕಾಸಿನ ಮಧ್ಯವಾರ್ಷಿಕ ಪರಿಶೀಲನಾ ವರದಿಯನ್ನು ಮಂಡಿಸುವುದು.
2. 2015-16ನೇ ಸಾಲಿನ ಪೂರಕ ಅಂದಾಜುಗಳ (ಎರಡನೇ ಕಂತು) ಮೇಲೆ ಚರ್ಚೆ, ಉತ್ತರ ಹಾಗೂ ಮತಕ್ಕೆ ಹಾಕುವುದು.

3. ಶಾಸನ ರಚನೆ

I.ವಿಧೇಯಕಗಳನ್ನು ಮಂಡಿಸುವುದು

1.ಕರ್ನಾಟಕ ಧನ ವಿನಿಯೋಗ (ಸಂಖ್ಯೆ 5) ವಿಧೇಯಕ 2015
ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿ) ಅವರು:-

ಅ) 2015ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 5) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2.ಕರ್ನಾಟಕ ಜಲಸಾರಿಗೆ ಮಂಡಳಿ ವಿಧೇಯಕ, 2015
ಶ್ರೀ ಬಾಬುರಾವ್ ಚಿಂಚನಸೂರು (ಜವಳಿ, ಬಂದರು ಹಾಗೂ ಒಳನಾಡು ಜಲಸಾರಿಗೆ ಸಚಿವರು) ಅವರು:-

ಅ) 2015ನೇ ಸಾಲಿನ ಕರ್ನಾಟಕ ಜಲಸಾರಿಗೆ ಮಂಡಳಿ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

ಪು.ತಿ.ನೋ.

II.ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1.ಕರ್ನಾಟಕ ಧನ ವಿನಿಯೋಗ (ಸಂಖ್ಯೆ 5) ವಿಧೇಯಕ 2015

ಶ್ರೀ ಸಿದ್ಧರಾಮಯ್ಯ (ಮುಖ್ಯಮಂತ್ರಿ) ಅವರು:-

ಅ)2015ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 5) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ)ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಕರ್ನಾಟಕ ಜಲಸಾರಿಗೆ ಮಂಡಳಿ ವಿಧೇಯಕ, 2015

ಶ್ರೀ ಬಾಬುರಾವ್ ಚಿಂಚನಸೂರು (ಜವಳಿ, ಬಂದರು ಹಾಗೂ ಒಳನಾಡು ಜಲಸಾರಿಗೆ ಸಚಿವರು) ಅವರು:-

ಅ)2015ನೇ ಸಾಲಿನ ಕರ್ನಾಟಕ ಜಲಸಾರಿಗೆ ಮಂಡಳಿ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ)ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. ಪ್ರಸ್ತಾವ

ಶ್ರೀ ತನ್ವೀರ್ ಸೇಠ್, ಶಾಸಕರು ಇವರು - 1984ನೇ ಕರ್ನಾಟಕ ಲೋಕಾಯುಕ್ತ ಅಧಿನಿಯಮ (ಕರ್ನಾಟಕ ಲೋಕಾಯುಕ್ತ ತಿದ್ದುಪಡಿ ಅಧಿನಿಯಮ 2015) ನಿಯಮ 6ರ ಅವಕಾಶಗಳಡಿ ಕರ್ನಾಟಕ ಉಪಲೋಕಾಯುಕ್ತರನ್ನು (ಶ್ರೀ ಸುಬಾಷ್ ಬಿ ಅಡಿ) ಪದಚ್ಯುತಿಗೊಳಿಸಬೇಕೆಂದು ಪ್ರಸ್ತಾವ ಮಂಡಿಸುವುದು.

5. ವರದಿಯನ್ನೊಪ್ಪಿಸುವುದು

ಡಾ: ಎಸ್. ರಫೀಕ್ ಅಹ್ಮದ್, (ಶಾಸಕರು ಮತ್ತು ಅಧ್ಯಕ್ಷರು, ಅಕ್ರಮ ಮರಳು ಗಣಿಗಾರಿಕೆ ಸಂಬಂಧ ರಚಿಸಲಾಗಿರುವ ವಿಧಾನಸಭಾ ಸದಸ್ಯರ ಅಧ್ಯಯನ ತಂಡ) ಅವರು - ಅಕ್ರಮ ಮರಳು ಗಣಿಗಾರಿಕೆ ಸಂಬಂಧ ರಚಿಸಲಾಗಿರುವ ವಿಧಾನಸಭಾ ಸದಸ್ಯರ ಅಧ್ಯಯನ ತಂಡದ "ಮಧ್ಯಂತರ ವರದಿಯನ್ನು" ಮಂಡಿಸುವುದು.

6. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಸದಸ್ಯರಿಗೆ ಕಳುಹಿಸಲಾಗಿರುವ 10 ಹಾಗೂ 11ನೇ ಪಟ್ಟಿಯ ರೀತ್ಯಾ.

7 . ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	**ಮೂವತ್ತನೇ ಪಟ್ಟಿ**
ಆ) ದಿನಾಂಕ:25.11.2015ರ 28ನೇ ಪಟ್ಟಿಯಿಂದ ವರ್ಗಾವಣೆಯಾದ ಶ್ರೀ ಬಿ.ಆರ್. ಪಾಟೀಲ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:419(5302)	:	**ಲೋಕೋಪಯೋಗಿ ಸಚಿವರು**
ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	**ಮೂವತ್ತನೇ ಪಟ್ಟಿ**

8. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರುಗಳಾದ ಹೆಚ್.ಸಿ. ಬಾಲಕೃಷ್ಣ, ಎಂ.ಟಿ. ಕೃಷ್ಣಪ್ಪ ಹಾಗೂ ಕೆ.ಎಸ್. ಮಂಜುನಾಥಗೌಡ ಅವರುಗಳು – ರಾಮನಗರ ಜಿಲ್ಲೆ, ಕನಕಪುರ ತಾಲ್ಲೂಕಿನ ಶಿವನಹಳ್ಳಿ ಗ್ರಾಮದಲ್ಲಿ ಬೆಂಗಳೂರು ಸಹಕಾರಿ ಹಾಲು ಒಕ್ಕೂಟದ ವತಿಯಿಂದ ಎನ್.ಡಿ.ಡಿ.ಬಿ.ಯಿಂದ ಫಿಜಿಬಲಿಟಿ ಹಾಗೂ ವಯಬಲಿಟಿ ರಿಪೋರ್ಟ್ ಪಡೆಯದೆ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ಹಾಗೂ ದುಬಾರಿ ಬೆಲೆಯಲ್ಲಿ ಜಮೀನನ್ನು ಖರೀದಿಸಿ ಒಕ್ಕೂಟಕ್ಕೆ ಕೋಟ್ಯಾಂತರ ರೂಪಾಯಿಗಳ ಆರ್ಥಿಕ ನಷ್ಟವನ್ನುಂಟುಮಾಡಿರುವ ಬಗ್ಗೆ ಚರ್ಚಿಸುವುದು.

9. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಪಿ.ಆರ್. ಸುಧಾಕರ್ ಲಾಲ್ ಅವರು – ರಾಜ್ಯದಲ್ಲಿರುವ ತಾಲ್ಲೂಕು ಕ್ರೀಡಾಂಗಣಗಳನ್ನು ಅಭಿವೃದ್ಧಿಪಡಿಸಲು ಸ್ಥಳೀಯ ಶಾಸಕರನ್ನು ತಾಲ್ಲೂಕು ಕ್ರೀಡಾಂಗಣ ಅಭಿವೃದ್ಧಿ ಸಮಿತಿಗೆ ಅಧ್ಯಕ್ಷರನ್ನಾಗಿ ನೇಮಿಸುವ ಬಗ್ಗೆ ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರ ಗಮನ ಸೆಳೆಯುವುದು.

2. ಡಾ:ಸಿ.ಎನ್. ಅಶ್ವಥ್‌ನಾರಾಯಣ ಅವರು - ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿ ಸ್ವಯಂ ಮೌಲ್ಯಮಾಪನ ಯೋಜನೆಯಲ್ಲಿ ಆಸ್ತಿ ತೆರಿಗೆ ಪಾವತಿಸದವರಿಗೆ ದಂಡ ವಿಧಿಸಲು ಕಾನೂನಿಗೆ ತಿದ್ದುಪಡಿ ತರುವ ಬಗ್ಗೆ ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುವುದು.

3. ಶ್ರೀ ಕೆ.ಜಿ. ಬೋಪಯ್ಯ ಅವರು – ವಿರಾಜಪೇಟೆ ತಾಲ್ಲೂಕು ಬೊಮ್ಮಾಡು ಗಿರಿಜನ ಕಾಲೋನಿಯ ಮೂಲಭೂತ ಸೌಕರ್ಯ ಕಾಮಗಾರಿಗಳಿಗೆ ಅರಣ್ಯ ಇಲಾಖೆಯ ಅಧಿಕಾರಿಗಳು ಅಡ್ಡಿಪಡಿಸುತ್ತಿರುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

4. ಶ್ರೀ ಜಿ.ಹೆಚ್. ಶ್ರೀನಿವಾಸ ಅವರು - ತರೀಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಭದ್ರಾ ಮೇಲ್ದಂಡೆ ಯೋಜನೆಗಾಗಿ ಭೂಸ್ವಾಧೀನಪಡಿಸಿಕೊಂಡಿರುವ ರೈತರ ಜಮೀನುಗಳಿಗೆ ಕೇಂದ್ರ ಸರ್ಕಾರವು ಇತ್ತೀಚೆಗೆ ನಿಗದಿಪಡಿಸಿರುವ ಪರಿಹಾರವನ್ನು ನೀಡುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

5. ಶ್ರೀ ಹೆಚ್.ಪಿ. ರಾಜೇಶ್ ಅವರು – ದಾವಣಗೆರೆ ಜಿಲ್ಲೆ ಜಗಳೂರು ತಾಲ್ಲೂಕಿನ ಭದ್ರಾ ಮೇಲ್ದಂಡೆ ಯೋಜನೆಯ ಪ್ರಗತಿಯ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

6. ಶ್ರೀ ಹೆಚ್.ಎಸ್. ಶಿವಶಂಕರ್ ಅವರು – ದಾವಣಗೆರೆ ಜಿಲ್ಲೆ ಹರಿಹರ ತಾಲ್ಲೂಕಿನ ಹಿರೇಹಳ್ಳ ತುಂಗಭದ್ರ ನದಿಯ ಹಿನ್ನೀರಿನಿಂದ ರಸ್ತೆ ಸಂಪರ್ಕ ಕಡಿತಗೊಳ್ಳುವುದರಿಂದ ಸಾರಥಿ ಚಿಕ್ಕಬಿದರೆ ಗ್ರಾಮಗಳ ಮಧ್ಯೆ ಸೇತುವೆ ನಿರ್ಮಾಣ ಮಾಡುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

7. ಶ್ರೀ ಪಿ. ರಾಜೀವ್ ಅವರು – ರಾಜ್ಯದ ಪೊಲೀಸ್ ಇಲಾಖೆಯಲ್ಲಿ ತರಬೇತಿ ಪಡೆದ ಪೊಲೀಸ್ ಪೇದೆಗಳನ್ನು ಆರ್ಡರ್ಲಿಗಳನ್ನಾಗಿ ಇಲಾಖೆಯ ಅಧಿಕಾರಿಗಳ ಕುಟುಂಬದವರ ಸೇವೆಗಾಗಿ ಬಳಸಿಕೊಳ್ಳುತ್ತಿರುವುದರಿಂದ ಆರ್ಡರ್ಲಿ ವ್ಯವಸ್ಥೆಯನ್ನು ರದ್ದುಪಡಿಸುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

8. ಶ್ರೀ ಜಿ.ಎಸ್. ಪಾಟೀಲ ಅವರು – ನಿರಂತರ ಜ್ಯೋತಿ ಯೋಜನೆಯ ಅಸಮರ್ಪಕ ನಿರ್ವಹಣೆಯಿಂದ ರೈತರಿಗೆ ಉಂಟಾಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಇಂದನ ಸಚಿವರ ಗಮನ ಸೆಳೆಯುವುದು.

9. ಶ್ರೀ ವಿಜಯಾನಂದ ಎಸ್. ಕಾಶಪ್ಪನವರ ಅವರು – ಬಾಗಲಕೋಟೆ ಜಿಲ್ಲೆಯ ಇಲಕಲ್ಲ ನಗರ ಹಾಗೂ ಹುನಗುಂದ ಪಟ್ಟಣದ ಮೂಲಕ ಹಾಯ್ದು ಹೋಗುವ ರಾಷ್ಟ್ರೀಯ ಹೆದ್ದಾರಿ–50ರಲ್ಲಿ ಹೊಸಪೇಟೆಯಿಂದ ಇಲಕಲ್ಲ ಹಾಗೂ ಇಲಕಲ್ಲದಿಂದ ವಿಜಯಪುರದವರೆಗೆ ಸರ್ವೀಸ್ ರಸ್ತೆ ಕಾಮಗಾರಿ ಪೂರ್ಣಗೊಳ್ಳದಿರುವುದರಿಂದ ರೈತರಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

10. ಶ್ರೀ ಹೆಚ್.ಎಸ್. ಪ್ರಕಾಶ್ ಅವರು – ರಾಜ್ಯದಲ್ಲಿ ಬಿ.ಇಡಿ., ವ್ಯಾಸಂಗ ಮಾಡಲು ಬಯಸಿರುವ ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸಲು ಸರ್ಕಾರದಿಂದ ಅನುಮತಿ ನೀಡದಿರುವುದರಿಂದ ತೊಂದರೆ ಉಂಟಾಗಿರುವ ಬಗ್ಗೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

11. ಶ್ರೀ ಶಿವಾನಂದ ಎಸ್. ಪಾಟೀಲ್ ಅವರು – ಬಸವನಬಾಗೇವಾಡಿ ಕ್ಷೇತ್ರದಲ್ಲಿ 2013–14 ಮತ್ತು 2014–15ನೇ ಸಾಲಿನಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ 4702 ವಿಶೇಷ ಘಟಕ ಮತ್ತು ಗಿರಿಜನ ಉಪಯೋಜನೆಗಳಡಿಯಲ್ಲಿ ಕೊಳವೆ ಬಾವಿಗಳ ಮೂಲಕ ನೀರಿನ ಸೌಲಭ್ಯ ಕಲ್ಪಿಸುವುದಕ್ಕಾಗಿ ಆಯ್ಕೆ ಮಾಡಲಾದ ಫಲಾನುಭವಿಗಳಿಗೆ ಇದುವರೆಗೆ ಕೊಳವೆ ಬಾವಿಗಳನ್ನು ಕೊರೆದು ನೀರಿನ ಸೌಲಭ್ಯ ಕಲ್ಪಿಸದಿರುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

12. ಶ್ರೀ ಕೆ.ಎಂ. ತಿಮ್ಮರಾಯಪ್ಪ ಅವರು – ಪಾವಗಡ, ಚಳ್ಳಕೆರೆ, ಮೊಣಕಾಲ್ಮೂರು, ಸಂಡೂರು, ಹೊಸಪೇಟೆ, ಕೂಡ್ಲಿಗಿ ತಾಲ್ಲೂಕುಗಳ ಗ್ರಾಮಗಳಿಗೆ ಕುಡಿಯುವ ನೀರಿನ ಯೋಜನೆಯಡಿ ಕಾಮಗಾರಿಗಳನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

13. ಶ್ರೀಯುತರಾದ ಹೆಚ್.ಡಿ. ರೇವಣ್ಣ, ಹೆಚ್.ಕೆ. ಕುಮಾರಸ್ವಾಮಿ, ಕೆ.ಎಂ. ಶಿವಲಿಂಗೇಗೌಡ, ಕೋನರಡ್ಡಿ ಹಾಗೂ ಇತರರು – ರಾಜ್ಯದ 136 ತಾಲ್ಲೂಕುಗಳನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಣೆ ಮಾಡಿದ್ದು, ಕೊಳವೆ ಬಾವಿಯ ವಿಫಲತೆಯಿಂದ ಜಾನುವಾರುಗಳು ತೀವ್ರ ತೊಂದರೆ ಅನುಭವಿಸುತ್ತಿದ್ದು, ಯಾವುದೇ ಕಾಮಗಾರಿ ನಿರ್ವಹಿಸದಿರುವುದರಿಂದ ತೊಂದರೆಯಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

14. ಡಾ:ಸಿ.ಎನ್. ಅಶ್ವಥ್‌ನಾರಾಯಣ ಅವರು – ಬೆಂಗಳೂರು ನಗರಕ್ಕೆ ಸಂಬಂಧಿಸಿದಂತೆ, ರಾಜೀವ್ ಆವಾಸ್ ಯೋಜನೆಯಡಿ 5672 ಮನೆಗಳು ಮಂಜೂರಾಗಿ ರದ್ದಾಗಿರುವ 7 ಯೋಜನೆಗಳನ್ನು ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಕೈಗೊಳ್ಳಲು ಸರ್ಕಾರಕ್ಕಿರುವ ತೊಂದರೆಗಳ ಬಗ್ಗೆ ಮಾನ್ಯ ವಸತಿ ಸಚಿವರ ಗಮನ ಸೆಳೆಯುವುದು.

ಎಸ್.ವೈ. ಕುಳಗೇರಿ
ಕಾರ್ಯದರ್ಶಿ(ಪ್ರ)

NR

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)